**Prajavani**

**Date:** 04-02-2017 **Page No. 3B**

Edition: Mysore **Language: Kannada**

# ಕ್ರೀಡಾ ನಿರ್ವಹಣೆಗೆ ನೂತನ ಕೋರ್ಸ್

ಮೈಸೂರು: ‘ಸೆಂಟರ್ ಫಾರ್ ಸ್ಪೋರ್ಟ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್’ (ಸಿಎಸ್ ಅಂಡ್ ಎಂಎಸ್) ಸಹಯೋಗದಲ್ಲಿ ನಗರದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್ ಸಂಸ್ಥೆಯಲ್ಲಿ (ಎಸ್‌ಡಿಎಂ ಐಎಂಡಿ) ‘ಸ್ಪೋರ್ಟ್ಸ್ ಮ್ಯಾನೇಜ್‌ಮೆಂಟ್ ಪ್ರೋಗ್ರಾಮ್’ ಕೋರ್ಸ್ ಆರಂಭವಾಗಲಿದೆ.

ಭಾರತದಲ್ಲಿ ಕ್ರೀಡಾ ಕ್ಷೇತ್ರ ಬೆಳವಣಿಗೆಯಾಗುತ್ತಿದ್ದು, ಹವ್ಯಾಸಿಗಳೇ ಹೆಚ್ಚಿನ ಸಂಖ್ಯೆಯಲ್ಲಿ ಈ ಕ್ಷೇತ್ರವನ್ನು ನಿರ್ವಹಣೆ ಮಾಡುತ್ತಿದ್ದಾರೆ. ಅದನ್ನು ಸೂಕ್ತ ರೀತಿಯಲ್ಲಿ ಮಾಡಬೇಕು ಎಂಬ ಉದ್ದೇಶದಿಂದ ಈ ಕೋರ್ಸ್ ಆರಂಭಿಸಲಾಗುತ್ತಿದೆ ಎಂದು ಸಿಎಸ್ ಅಂಡ್ ಎಂಎಸ್‌ನ ಟ್ರಸ್ಟಿ ಎನ್ರಿಕೊ ಪಿಪೆರ್ನೊ ಸುದ್ದಿಗೋಷ್ಠಿಯಲ್ಲಿ ಗುರುವಾರ ತಿಳಿಸಿದರು.

3 ತಿಂಗಳ ಅವಧಿಯ ‘ಸರ್ಟಿಫಿಕೇಟ್ ಪ್ರೋಗ್ರಾಮ್ ಇನ್ ಸ್ಪೋರ್ಟ್ಸ್ ಮ್ಯಾನೇಜ್‌ಮೆಂಟ್’ ಮತ್ತು 9 ತಿಂಗಳ ಅವಧಿಯ ‘ಪೋಸ್ಟ್ ಗ್ರಾಜುಯೇಟ್ ಪ್ರೋಗ್ರಾಮ್ ಇನ್ ಸ್ಪೋರ್ಟ್ಸ್ ಮ್ಯಾನೇಜ್‌ಮೆಂಟ್’ ಎಂಬ 2 ಕೋರ್ಸ್ ವಿನ್ಯಾಸಗೊಳಿಸಲಾಗಿದೆ ಎಂದು ಅವರು ಹೇಳಿದರು.

Launch of Sports Management Programme